3) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ಸದರಿ 59 ವಿದ್ಯಾರ್ಥಿ ನಿಲಯಗಳ ಪೈಕಿ 48 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡದಲ್ಲಿ ಹಾಗೂ 11 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಇರುತ್ತವೆ. ಹಾಗೆಯೇ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಸದರಿ 04 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ.

ಆಹಾರ ಸುರಕ್ಷತಾ ಕಾಯ್ದೆ ಜಾರಿಗೊಳಿಸುವುದು

449(313); ಶ್ರೀ ಗೋಪಾಲಯ್ಯ ಕೆ (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಕಾಯ್ದೆ ಆಹಾರ ಸುರಕ್ಷತಾ ಕಾಯ್ದೆ 2006 ಅನುಷ್ಠಾನಗೊಳಿಸಲಾಗಿದೆಯೇ;

ಆ) ಈ ಕಾಯ್ದೆ ಅನುಷ್ಠಾನಕ್ಕಾಗಿ ನೇಮಕಗೊಂಡಿರುವ ವೈದ್ಯರು ಹಾಗೂ ಇತರ ಸಿಬ್ಬಂದಿಗಳೆಷ್ಟು;

ಇ) ಈ ಕಾಯ್ದೆಯನ್ನು ರಾಜ್ಯದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗಿಲ್ಲವೆಂಬುದು ನಿಜವೇ;

ಈ) ಹಾಗಿದ್ದಲ್ಲಿ, ಈ ಕಾಯ್ದೆಯ ಅನುಷ್ಠಾನವನ್ನು ಬೇರೆ ಇಲಾಖೆಗೆ ವರ್ಗಾಯಿಸಲು ಆಲೋಚಿಸಲಾಗಿದೆಯೇ

ಉ) ಈ ಕಾಯ್ದೆ ಅನುಷ್ಠಾನದಿಂದ ಆಗುವ ಪ್ರಯೋಜನಗಳೇನು;

ಊ) ಈ ಕಾಯ್ದೆ ಅನುಷ್ಠಾನಕ್ಕೆ ಖರ್ಚಾಗುವ ವೆಚ್ಚವೆಷ್ಟು;

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು

ಆ) ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ನೀಗಿಸುವ ಹಿತದೃಷ್ಟಿಯಿಂದ ವೈದ್ಯರನ್ನು ಅಂಕಿತಾಧಿಕಾರಿ ಹುದ್ದೆಯಿಂದ ಬಿಡುಗಡೆಗೊಳಿಸಲಾಗಿದೆ. ಇತರೆ

ಸಿಬ್ಬಂದಿಗಳಾದ 65 ಆಹಾರ ಸುರಕ್ಷತಾಧಿಕಾರಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

ಇ) ಈ ಕಾಯ್ದೆಯನ್ನು ರಾಜ್ಯದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

ಈ) ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ಈ ಕಾಯ್ದೆ ಅನುಷ್ಠಾನದಿಂದ ಸಾರ್ವಜನಿಕರಿಗೆ ಉತ್ತಮವಾದ, ಕಲಬೆರಕೆ ರಹಿತ ಆಹಾರ ಪೂರೈಸಲು ಅನುಕೂಲವಾಗುತ್ತದೆ.

ಊ) 2014–15ನೇ ಸಾಲಿನಲ್ಲಿ ಈ ಕಾಯ್ದೆ ಅನುಷ್ಠಾನಕ್ಕಾಗಿ ರೂ.500.00 ಲಕ್ಷಗಳು ನಿಗದಿಪಡಿಸಲಾಗಿದೆ.

ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ

452(1001); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮಂಜೂರಾಗಿರುವ ವೈದ್ಯರ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ಮತ್ತು ಎಷ್ಟು ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇವೆ; (ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳಲ್ಲಿ ಒದಗಿಸುವುದು);

ಆ) ಗ್ರಾಮೀಣ ಭಾಗದ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಕೊರತೆಯನ್ನ ನೀಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಪ್ರಸಕ್ತ ಸಾಲಿನಲ್ಲಿ ಖಾಲಿ ಇರುವ ಎಲ್ಲ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?